ಬೇಡಿಕೆ ಸಂಖ್ಯೆ - 60 - ಮಲೆನಾಡು ಪ್ರದೇಶ ಅಭಿವೃದ್ಧಿ

ಶ್ರೀ ಹೆಚ್.ಜಿ. ಗೋವಿಂದೇಗೌಡ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ) : ಮಾನ್ಯ ಅಧ್ಯಕ್ಷರೆ, ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ 31.03.1996ರಂದು ಕೊನೆಗಳ್ಳುವ ಆರ್ಥಿಕ ವರ್ಷದಲ್ಲಿ "ಮಲೆನಾಡು ಪ್ರದೇಶ ಅಭಿವೃದ್ಧಿಗೆ" ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ 30,00,00,000 ರೂ.ಗಳಿಗಿಂತ ಮೀರದ ಮೊತ್ತವನ್ನು (ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡಬೇಕೆಂದು ನಾನು ಕೋರುತ್ತೇನೆ."

ಪ್ರಸ್ತಾವವನ್ನು ಮಂಡಿಸಲಾಯಿತು.

ಪೂರಕ ಅಂದಾಜುಗಳು 1995-96

ಶ್ರೀ ಸಿದ್ಧರಾಮಯ್ಯ (ಹಣಕಾಸು ಯೋಜನಾ ಸಚಿವರು) : ಮಾನ್ಯ ಅಧ್ಯಕ್ಷರೆ, ಭಾರತ ಸಂವಿಧಾನ 205(1)ನೇ ಅನುಚ್ಛೇದದ ಮೇರೆಗೆ, 1995-96ನೇ ಸಾಲಿಗೆ ಸಂಬಂಧಿಸಿದ ಪೂರಕ ಅಂದಾಜುಗಳ (ಮೊದಲನೇ ಕಂತು) ಅನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು

ಪ್ರಕಟಣೆ

ಅಧ್ಯಕ್ಷರು : 1) ದಿನಾಂಕ 18ನೇ ಸೆಪ್ಟೆಂಬರ್, 1995ರಂದು ಪ್ರಶ್ನೋತ್ತರ ನಡೆಯದ ಕಾರಣ 24ನೇ ಪಟ್ಟಿಯಲ್ಲಿರುವ ಚುಕ್ಕೆ ಗುರುತಿನ 15 ಪ್ರಶ್ನೆಗಳ ಪೈಕಿ, 10 ಪ್ರಶ್ನೆಗಳಿಗೆ ಉತ್ತರಗಳನ್ನು ಹಾಗೂ ತಡೆಹಿಡಿಯಲಾದ 2 ಪ್ರಶ್ನೆಗಳಿಗೆ ಉತ್ತರಗಳನ್ನು ಮತ್ತು ಲಿಖಿತ ಮೂಲಕ ಉತ್ತರಿಸುವ 57 ಪ್ರಶ್ನೆಗಳ ಪೈಕಿ 45 ಪ್ರಶ್ನೆಗಳಿಗೆ ಉತ್ತರಗಳನ್ನು ಸದನದ ಮುಂದಿಡುತ್ತೇನೆ.

2) ದಿನಾಂಕ 19ನೇ ಸೆಪ್ಟೆಂಬರ್, 1995ರ 25ನೇ ಪಟ್ಟಿಯಲ್ಲಿರುವ 14 ಪ್ರಶ್ನೆಗಳಿಗೆ ಉತ್ತರಗಳನ್ನು ಹಾಗೂ ತಡೆಹಿಡಿಯಲಾದ 6 ಪ್ರಶ್ನೆಗಳಿಗೆ ಉತ್ತರಗಳನ್ನು ಮತ್ತು ಲಿಖಿತ ಮೂಲಕ ಉತ್ತರಿಸುವ 36 ಪ್ರಶ್ನೆಗಳ ಪೈಕಿ 27 ಪ್ರಶ್ನೆಗಳಿಗೆ ಉತ್ತರಗಳನ್ನು ಸದನದ ಮುಂದಿಡುತ್ತೇನೆ.

ಚುಕ್ಕೆ ಗುರುತಿನ ಪ್ರಶ್ನೋತ್ತರಗಳು

ವರಾಹಿ ಜಲ ವಿದ್ಯುತ್ ಯೋಜನೆಯಲ್ಲಿ ಮನೆ, ಜಮೀನು ಕಳೆದು ಕೊಂಡವರಿಗೆ ವಿದ್ಯುತ್ ನಿಗಮದಲ್ಲಿ ಉದ್ಯೋಗ.

347 - ಶ್ರೀ ಅರಗ ಜ್ಞಾನೇಂದ್ರ : ಮಾನ್ಯ ಉಪ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?